ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ		1513 (1831)
ಸದಸ್ಯರ ಹೆಸರು		ಶ್ರೀ ಅರುಣ ಶಹಾಪೂರ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ		**22-03-2021**
ಉತ್ತರಿಸಬೇಕಾದ ಸಚಿವರು		ಉಪ ಮುಖ್ಯಮಂತ್ರಿ (ಉನ್ನತ ಶಿಕ್ಷಣ)
ಪ್ರಶ್ನೆ		**ಉತ್ತರ**
ಅ)	ಅನುದಾನಿತ ಸಂಸ್ಥೆಗಳ ಶಿಕ್ಷಕ, ಸಿಬ್ಬಂದಿ ವರ್ಗದವರಿಗೆ ಸೇವೆಗೆ ಸೇರಿದ ದಿನಾಂಕದಿಂದಲೇ ಸೇವಾ ಸೌಲಭ್ಯಗಳನ್ನು ಒದಗಿಸುವ ಕುರಿತು (ಕಾಲ್ಪನಿಕ ವೇತನ ಬಡ್ತಿ) ಸರ್ಕಾರ ತಕ್ಷಣ ಕ್ರಮ ಕೈಗೊಳ್ಳುವುದೇ;	ಸರ್ಕಾರವು ಅನುದಾನಿತ ಸಿಬ್ಬಂದಿಗಳ ಸೇವಾ ಮತ್ತು ಪಿಂಚಣಿ ಸೌಲಭ್ಯಗಳನ್ನು ನಿಯಂತ್ರಿಸುವ ಸಲುವಾಗಿ ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರೆ ಸೌಲಭ್ಯಗಳ ನಿಯಂತ್ರಣ) ವಿಧೇಯಕ 2014 ಅನ್ನು ಜಾರಿಗೊಳಿಸಿರುತ್ತದೆ. ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಿಸಿದ್ದ ರಿಟ್ ಅರ್ಜಿ ಸಂಖ್ಯೆ:21216/2014ಕ್ಕೆ ದಿ:10.07.2015ರಲ್ಲಿ ನೀಡಿದ ತೀರ್ಪಿನನ್ವಯ ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರೇ ಸೌಲಭ್ಯಗಳ ನಿಯಂತ್ರಣ) ಅಧಿನಿಯಮ 2014ನ್ನು ಸಂವಿಧಾನದ ಪರಿಚ್ಛೇದ 14ರ ವಿರುದ್ಧವಾಗಿದೆ ಎಂದು ಪರಿಗಣಿಸಿ ಅದನ್ನು ವಜಾಗೊಳಿಸಿದೆ. ಸದರಿ ತೀರ್ಪಿನ ವಿರುದ್ಧ ರಾಜ್ಯ ಸರ್ಕಾರವು ರಿಟ್ ಅಪೀಲ್ ಸಂಖ್ಯೆ:2476/2015ನ್ನು ದಾಖಲಿಸಿದ್ದು, ಸದರಿ ರಿಟ್ ಅಪೀಲ್‌ಗೆ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 27.11.2015ರಂದು ಮಧ್ಯಂತರ ಆದೇಶ ನೀಡಲಾಗಿದೆ. ಸರ್ಕಾರವು ದಾಖಲಿಸಿರುವ ರಿಟ್ ಅಪೀಲು ನ್ಯಾಯಾಲಯದಲ್ಲಿ ಬಾಕಿ ಇದ್ದು, ಈ ಕುರಿತು ಮಾನ್ಯ ರಾಜ್ಯ ಉಚ್ಚ ನ್ಯಾಯಾಲಯವು ನೀಡುವ

		ಅಂತಿಮ ತೀರ್ಪಿಗೆ ಒಳಪಟ್ಟು ಕ್ರಮವಹಿಸಲಾಗುವುದು.
ಆ)	ಕಾಲ್ಪನಿಕ ವೇತನ ಬಡ್ತಿ ಜಾರಿಗೊಳಿಸುವ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು; ಈ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು;	ಸರ್ಕಾರವು ದಾಖಲಿಸಿರುವ ರಿಟ್ ಅಪೀಲ್ ಸಂಖ್ಯೆ:2476/2015 ನ್ಯಾಯಾಲಯದಲ್ಲಿ ಬಾಕಿ ಇದ್ದು ಮಾನ್ಯ ನ್ಯಾಯಾಲಯವು ನೀಡುವ ಅಂತಿಮ ತೀರ್ಪಿಗೊಳಪಟ್ಟು ಕ್ರಮವಹಿಸಲಾಗುವುದು.
ಇ)	ಕಾಲ್ಪನಿಕ ವೇತನ ಬಡ್ತಿ ನೀಡವ ಕುರಿತು ಪರಿಶೀಲನೆ ನಡೆಸಲು ಸಮಿತಿ ರಚನೆ ಯಾವಾಗ ಮಾಡಲಾಯಿತು; (ಸಮಿತಿಯ ಸಂಪೂರ್ಣ ವಿವರವನ್ನು ಒದಗಿಸುವುದು)	ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಬಸವರಾಜ ಹೊರಟ್ಟಿರವರ ಅಧ್ಯಕ್ಷತೆಯಲ್ಲಿ ಸಮಿತಿಯೊಂದನ್ನು ಸರ್ಕಾರದ ಹಂತದಲ್ಲಿ 2015ರಲ್ಲಿ ರಚಿಸಲಾಗಿತ್ತು. ಸದರಿ ಸಮಿತಿಯಲ್ಲಿ ಪ್ರಾಥಮಿಕ ಮತ್ತು ಫ್ರೌಡ ಶಿಕ್ಷಣ ಹಾಗೂ ಉನ್ನತ ಶಿಕ್ಷಣ ಇಲಾಖೆಯ ಅಧಿಕಾರಿಗಳಿದ್ದು, ಆ ಸಮಿತಿಯು ಅನುದಾನರಹಿತ ಸೇವೆಯ ಅವಧಿಯನ್ನು ಪರಿಗಣಿಸಿ ಕಾಲ್ಪನಿಕವಾಗಿ ವೇತನವನ್ನು ನಿಗಧಿಪಡಿಸಿದಲ್ಲಿ, ಸರ್ಕಾರಕ್ಕೆ ಎಷ್ಟು ವಾರ್ಷಿಕ ಆರ್ಥಿಕ ಹೊರೆ ಆಗುವುದೆಂಬ ಬಗ್ಗೆ ಸ್ಪಷ್ಟ ಮಾಹಿತಿಯನ್ನು ಸರ್ಕಾರಕ್ಕೆ ನೀಡುವ ಹಿನ್ನೆಲೆಯಲ್ಲಿ ದಿ:30/01/2015ರಂದು ಸಭೆ ನಡೆಸಿರುತ್ತದೆ. ಕಾಲೇಜು ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ 108 ಕಾಲೇಜುಗಳು ಅಧಿನಿಯಮದ ವ್ಯಾಪ್ತಿಗೊಳಪಟ್ಟಿದ್ದು, ಸದರಿ ಕಾಲೇಜುಗಳಲ್ಲಿ 855 ಬೋಧಕರು ಹಾಗೂ 878 ಬೋಧಕೇತರರು ಒಟ್ಟು 1733 ನೌಕರರುಗಳಿಗೆ ವೇತನ ರೂ.38.51 ಕೋಟಿ ಹಾಗೂ ಪಿಂಚಣಿ ಸೌಲಭ್ಯಕ್ಕೆ 147.76 ಕೋಟಿ ಒಟ್ಟು 185.30 ಕೋಟಿ ಸರ್ಕಾರಕ್ಕೆ ವಾರ್ಷಿಕ ಅಂದಾಜು ಆರ್ಥಿಕ ಹೊರೆಯಾಗುವುದೆಂಬ ಮಾಹಿತಿಯನ್ನು ಒದಗಿಸಲಾಗಿರುತ್ತದೆ.

ಈ)	ಸಮಿತಿಯ ವರದಿಯ ಪ್ರಕಾರ ಕಾಲ್ಪನಿಕ ವೇತನ ಬಡ್ತಿಯನ್ನು ನೀಡಲು ಸರ್ಕಾರಕ್ಕೆ ತಗಲುವ ವೆಚ್ಚವೆಷ್ಟು;	ಸಮಿತಿಯ ವರದಿಯನ್ವಯ ಕಾಲೇಜು ಶಿಕ್ಷಣ ಇಲಾಖೆಯ ಬೋಧಕ/ಬೋಧಕೇತರ ಸಿಬ್ಬಂದಿಗಳ ಕಾಲ್ಪನಿಕ ವೇತನ ಬಡ್ತಿ ಸಮಸ್ಯೆಯನ್ನು ಪರಿಹರಿಸಲು ಒಟ್ಟು 185.30 ಕೋಟಿ ಅಂದಾಜು ವೆಚ್ಚವಾಗುವುದೆಂದು ಲೆಕ್ಕ ಹಾಕಲಾಗಿದೆ.
ಉ)	ಕಾಲ್ಪನಿಕ ವೇತನ ಬಡ್ತಿ ನೀಡಲು ಬೇಕಾಗುವ ಅಗತ್ಯ ಅನುದಾನವನ್ನು 2021-22ರ ಬಜೆಟ್‌ನಲ್ಲಿ ಮೀಸಲಿಟ್ಟು, ಈ ಸಮಸ್ಯೆಯನ್ನು ಬಗೆಹರಿಸಲು ಸರ್ಕಾರ ಮುಂದಾಗುವುದೇ; ಬಜೆಟ್‌ನಲ್ಲಿ ಅನುದಾನವನ್ನು ಮೀಸಲಿಡಲು ಸಾಧ್ಯವಾಗದಿದ್ದಲ್ಲಿ, ಇದಕ್ಕೆ ಕಾರಣವೇನು; ಯಾವ ಕಾಲಮಿತಿಯೊಳಗೆ ಈ ಸಮಸ್ಯೆಯನ್ನು ಬಗೆಹರಿಸಲು ಸರ್ಕಾರ ಮುಂದಾಗುವುದು;	ರಾಜ್ಯ ಸರ್ಕಾರವು ದಾಖಲಿಸಿರುವ ರಿಟ್ ಅಪೀಲು ನ್ಯಾಯಾಲಯದಲ್ಲಿ ಬಾಕಿ ಇದ್ದು, ಈ ಕುರಿತು ಮಾನ್ಯ ರಾಜ್ಯ ಉಚ್ಚ ನ್ಯಾಯಾಲಯವು ನೀಡುವ ಅಂತಿಮ ತೀರ್ಪಿನನ್ವಯ ಕ್ರಮವಹಿಸಲಾಗುವುದು.

ಇಡಿ 41 ಯುಪಿಸಿ 2021

(ಡಾ: ಅಶ್ವಥ್ ನಾರಾಯಣ ಸಿ.ಎನ್.),
ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)